# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:ತಹಸೀಲ್ದಾರರನ್ನು ರಾಷ್ಟ್ರೀಯ ಕುಟುಂಬ ನೆರವು ಯೋಜನೆಯ ಮಂಜೂರಾತಿ ಪ್ರಾಧಿಕಾರಿಯನ್ನಾಗಿ ನೇಮಿಸುವ ಬಗ್ಗೆ.

ಉಲ್ಲೇಖ:ರಾಷ್ಟ್ರೀಯ ಸಾಮಾಜಿಕ ನೆರವು ಯೋಜನೆ ನಿಯಮಾವಳಿಗಳು 1995-96.

****//****

ಪ್ರಸ್ತಾವನೆ:

ರಾಷ್ಟ್ರೀಯ ಸಾಮಾಜಿಕ ನೆರವು ಯೋಜನೆಯಡಿ ಬಾರತ ಸರ್ಕಾರವು ರಾಷ್ಟ್ರೀಯ ಕುಟುಂಬ ನೆರವು ಯೋಜನೆಯನ್ನು 15ನೇ ಆಗಸ್ಟ್ 1995ರಂದು ಜಾರಿಗೆ ತಂದಿದ್ದು ಅದರಂತೆ ಬಡತನ ರೇಖೆಗಿಂತ ಕೆಳಗಿರುವ 18 ರಿಂದ 65 ವರ್ಷದೊಳಗಿನ ಕುಟುಂಬದ ಮುಖ್ಯಸ್ಥನ ಮರಣವಾದಲ್ಲಿ(Primary bread winner) ದುಃಖತಪ್ತ ಕುಟುಂಬಗಳಿಗೆ ರೂ.10000ಗಳ ಪರಿಹಾರವಾಗಿ ನೀಡಲಾಗುವುದು.

ಇದರ ಕಾರ್ಯ ವಿದಾನವು ಈ ಕೆಳಕಂಡಂತಿರುತ್ತದೆ,.

1)ನೊಂದ ಕುಟುಂಬದ ಸದಸ್ಯರು ಸಂಬಂಧಪಟ್ಟ ಗ್ರಾಮ ಪಂಚಾಯಿತಿ/ ಪಟ್ಟಣ ಪಂಚಾಯಿತಿಗಳಿಗೆ ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಬೇಕು.

2) ಅರ್ಜಿಯ ಸತ್ಯಾರ್ಥವನ್ನು ಪರಿಶೀಲಿಸಿದ ನಂತರ ಗ್ರಾಮ ಪಂಚಾಯಿತಿ/ಪಟ್ಟಣ ಪಂಚಾಯಿತಿಗಳು ಸಂಬಂಧಪಟ್ಟ ತಹಸೀಲ್ದಾರ್‌ರಿಗೆ ಕಳುಹಿಸಿಕೊಡುತ್ತಾರೆ.

3)ಸಂಬಂದಪಟ್ಟ ತಹಸೀಲ್ದಾರರು ಅರ್ಜಿಯ ಸತ್ಯಾಸತ್ಯತೆಗಳು ಸಮರ್ಪಕವಾಗಿದೆಯೆಂದು ತಿಳಿದುಕೊಂಡ ನಂತರ ಮಂಜೂರಾತಿ ಪ್ರಾಧಿಕಾರಕ್ಕೆ ಅರ್ಜಿಯ ಮಂಜೂರಾತಿಗೆ ಶಿಫಾರಸ್ಸು ಮಾಡುತ್ತಾರೆ.

4)ರಾಷ್ಟ್ರೀಯ ಕುಟುಂಬ ನೆರವು ಯೋಜನೆಯ ಮಂಜೂರಾತಿ ಪ್ರಾಧಿಕಾರಿಯು ಸಂಬಂಧಪಟ್ಟ ಉಪವಿಭಾಗಧಿಕಾರಿಗಳಾಗಿರುತ್ತಾರೆ.

ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯವು ಸಾಮಾಜಿಕ ಭದ್ರತಾ ಯೋಜನೆಗಳನ್ನು ಗಣಕೀಕರಣಗೊಳಿಸುತ್ತಿದೆ. ಸಾಮಾಜಿಕ ಭದ್ರತಾ ಯೋಜನೆಯನ್ನು ಸರ್ಕಾರದ ವಿವಿಧ ಇಲಾಖೆಗಳು ಅನುಷ್ಠಾನಗೊಳಿಸುತ್ತಿದ್ದರು ಸಹ ತಹಸೀಲ್ದಾರರು ಕೆಳಕಂಡ ಸಾಮಾಜಿಕ ಭದ್ರತಾ ಯೋಜನೆಗಳ ಮಂಜೂರಾತಿ ಪ್ರಾಧಿಕಾರಿಯಾಗಿರುತ್ತಾರೆ.

1)ಇಂದಿರಾ ಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ
2)ಅಂಗವಿಕಲ ವೇತನ
3)ನಿರ್ಗತಿಕ ವಿಧವಾ ವೇತನ
4)ಸಂಧ್ಯ ಸುರಕ್ಷಾ ಯೋಜನೆ
5)ಅಂತ್ಯ ಸಂಸ್ಕಾರ ಸಹಾಯ ನಿಧಿ ಯೋಜನೆ
6)ಆದರ್ಶ ವಿವಾಹ ಯೋಜನೆ

ಅದುದರಿಂದ ಎಲ್ಲಾ ಸಾಮಾಜಿಕ ಭದ್ರತಾ ಯೋಜನೆಗಳ ಮಂಜೂರಾತಿ ಪ್ರಾಧಿಕಾರಿಯಾಗಿ ತಹಸೀಲ್ದಾರರೇ ಇದ್ದರೆ,

- ಗಣಕೀಕರಣ ಕಾರ್ಯವು ಅತ್ಯಂತ ಸುಲಭವಾಗುತ್ತದೆ.
- ಮಂಜೂರಾತಿಯ ಕಾರ್ಯ ವಿಧಾನವು ಸರಳವಾಗುತ್ತದೆ.
- ಅರ್ಜಿದಾರರಿಗೆ ಬೇಗ ಪರಿಹಾರ ಧನ ತಲುಪುತ್ತದೆ.
- ಎಂಐಎಸ್ ವರದಿಗಳನ್ನು ತಯಾರಿಸುವ ಕಾರ್ಯ ಸುಲಭವಾಗುತ್ತದೆ.

ರಾಷ್ಟ್ರೀಯ ಸಾಮಾಜಿಕ ನೆರವು ಯೋಜನೆಯಡಿ ಭಾರತ ಸರ್ಕಾರ ಹೊರಡಿಸಿರುವ ನಿಯಾಮಾವಳಿಗಳಲ್ಲಿ ಮಂಜೂರಾತಿ ಪ್ರಾಧಿಕಾರಿಯನ್ನು ನೇಮಿಸುವ ಅಧಿಕಾರವನ್ನು ರಾಜ್ಯ ಸರ್ಕಾರಗಳಿಗೆ ನೀಡಲಾಗಿದೆ. ಅದ್ದರಿಂದ ತಹಸೀಲ್ದಾರರನ್ನು ರಾಷ್ಟ್ರೀಯ ಕುಟುಂಬ ನೆರವು ಯೋಜನೆಯ ಮಂಜೂರಾತಿ ಪ್ರಾಧಿಕಾರಿಯನ್ನಾಗಿ ನೇಮಿಸಲು ಸರ್ಕಾರವು ತೀರ್ಮಾನಿಸಲಾಗಿದ್ದು, ಅದರಂತೆ ಈ ಕೆಳಕಂಡ ಅದೇಶ

<u>ಸರ್ಕಾರದ ಆದೇಶ ಸಂಖ್ಯೆ:ಆರ್‌ಡಿ 46 ಡಿಎಸ್‌ಪಿ 2008, ಬೆಂಗಳೂರು. ದಿನಾಂಕ: 04/06/2008.</u>

ಸರ್ಕಾರವು ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಬಡತನ ರೇಖೆಗಿಂತ ಕೆಳಗಿರುವ 18 ರಿಂದ 65 ವರ್ಷದೊಳಗಿನ ಕುಟುಂಬದ ಮುಖ್ಯಸ್ಥನ ಮರಣವಾದಲ್ಲಿ(Primary bread winner) ದುಃಖತಪ್ತ ಕುಟುಂಬಗಳಿಗೆ ರೂ.10000ಗಳ ಪರಿಹಾರವಾಗಿ ನೀಡುವ ಕಾರ್ಯಕ್ರಮವಾದ ರಾಷ್ಟ್ರೀಯ ಕುಟುಂಬ ನೆರವು ಯೋಜನೆಯ ಮಂಜೂರಾತಿ ಪ್ರಾಧಿಕಾರಿಯಾಗಿ ಸಂಬಂಧಪಟ್ಟ ತಹಸೀಲ್ದಾರರನ್ನು ನೇಮಿಸಲಾಗಿದೆ. ಉಪವಿಭಾಗಧಿಕಾರಿಗಳನ್ನು ಉಸ್ತುವಾರಿ ಪ್ರಾಧಿಕಾರಿಯಾಗಿ ನೇಮಿಸಲಾಗಿದೆ. ಉಳಿದ ಮಂಜೂರಾತಿ ಕಾರ್ಯವಿಧಾನದಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲಾ.

ಕರ್ನಾಟಕದ ರಾಜ್ಯಪಾಲರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

4/6/08
(ಎಸ್. ಕಾತ್ಯಾಯಿನಿ ದೇವಿ)
ಪೀಠಾಧಿಕಾರಿಗಳು,
ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ
ನಿರ್ದೇಶನಾಲಯ, ಕಂದಾಯ ಇಲಾಖೆ.

ಇವರಿಗೆ,
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯಕ್ಕೆ ಕಳುಹಿಸಿಬೇಕೆಂದು ಕೋರಿದೆ.

ಪ್ರತಿಯನ್ನು

1. ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ) (ಎ.ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಂದಾಯ ಇಲಾಖೆ ಬೆಂಗಳೂರು.
4. ಪ್ರಾದೇಶಿಕ ಆಯುಕ್ತರು.ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗಾ.
5. ಎಲ್ಲಾ ಜಿಲ್ಲಾಧಿಕಾರಿಗಳು.
6. ಎಲ್ಲಾ ತಹಸೀಲ್ದಾರರು/ಎಲ್ಲಾ ಉಪವಿಭಾಗಧಿಕಾರಿಗಳು.
7. ನಿದೇಶಕರು.ಖಜಾನೆ ಇಲಾಖೆ.ಬೆಂಗಳೂರು.
8. ಎಲ್ಲಾ ಜಿಲ್ಲಾ ಖಜಾನೆ ಹಾಗೂ ಉಪ ಖಜಾನೆ ಅಧಿಕಾರಿಗಳು.
9. ಹೆಚ್ಚುವರಿ ಪ್ರತಿ ಮತ್ತು ರಕ್ಷಾ ಕಡತ.ಶ